# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : 896

**ಸದಸ್ಯರ ಹೆಸರು** : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 14.03.2025.

**ಉತ್ತರಿಸುವವರು** : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿರುವ ಅಂಗನವಾಡಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ವೇತನ ಹೆಚ್ಚಿಸಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.</td></tr>
<tr><td>ಆ)</td><td>ಬಂದಿದ್ದಲ್ಲಿ, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಗೌರವಧನ ಹೆಚ್ಚಿಸುವುದು ಹಾಗೂ ನಿವೃತ್ತರಾದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಗ್ರ್ಯಾಚ್ಯುಯಿಟಿ ನೀಡುವ ಕುರಿತು ಸರ್ಕಾರ ಇದುವರೆಗೆ ಯಾವುದೇ ಕ್ರಮ ವಹಿಸದಿರಲು ಕಾರಣಗಳೇನು;</td><td rowspan="2">ಪ್ರಸ್ತುತ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿ ಮತ್ತು ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಈ ಕೆಳಕಂಡಂತೆ ಮಾಸಿಕ ಗೌರವಧನವನ್ನು ಪಾವತಿಸಲಾಗುತ್ತಿದೆ.
<table>
<tr><th rowspan="2">ಸಿಬ್ಬಂದಿ ವಿವರ</th><th colspan="3">ಗೌರವಧನ (ರೂ. ಗಳಲ್ಲಿ)</th></tr>
<tr><th>0-10 ವರ್ಷದವರೆಗೆ ಸೇವೆ ಸಲ್ಲಿಸಿದವರು</th><th>10 ರಿಂದ 20 ವರ್ಷದವರೆಗೆ ಸೇವೆ ಸಲ್ಲಿಸಿದವರು</th><th>20 ವರ್ಷಕ್ಕಿಂತ ಹೆಚ್ಚು ಸೇವೆ ಸಲ್ಲಿಸಿದವರು</th></tr>
<tr><td>ಅಂಗನವಾಡಿ ಕಾರ್ಯಕರ್ತೆ</td><td>11,000</td><td>11,250</td><td>11,500</td></tr>
<tr><td>ಅಂಗನವಾಡಿ ಸಹಾಯಕಿ</td><td>6,250</td><td>6,500</td><td>6,750</td></tr>
<tr><td>ಮಿನಿ ಅಂಗನವಾಡಿ ಕಾರ್ಯಕರ್ತೆ</td><td>7,250</td><td>7,500</td><td>7,750</td></tr>
</table>
2025-26ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-159 ರಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ರೂ.1000/- ಹಾಗೂ ಅಂಗನವಾಡಿ ಸಹಾಯಕಿಯರಿಗೆ ರೂ.750/- ಗಳನ್ನು ಹೆಚ್ಚಿಸುವುದಾಗಿ ಘೋಷಿಸಲಾಗಿದೆ.<br><br>ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರು ಹಾಗೂ ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ 2023-24ನೇ ಸಾಲಿನ ಆರ್ಥಿಕ ವರ್ಷದಿಂದ ಜಾರಿಗೆ ಬರುವಂತೆ ಉಪಧನ (Gratuity) ಪಾವತಿಸುವ ಕುರಿತು ದಿನಾಂಕ: 04.02.2023ರ ಆದೇಶದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.<br><br>ದಿನಾಂಕ: 21.06.2024ರ ಆದೇಶದಲ್ಲಿ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರು ಹಾಗೂ ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ನಿವೃತ್ತಿ ಉಪಧನ ಪಾವತಿ ಕುರಿತಂತೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.</td></tr>
<tr><td>ಇ)</td><td>ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವ ಹೊಣೆಯನ್ನು ಹೊತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಗೌರವಧನ ಹೆಚ್ಚಿಸುವುದು ಹಾಗೂ ನಿವೃತ್ತರಾದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಗ್ರ್ಯಾಚ್ಯುಯಿಟಿ ನೀಡಲು ಯಾವ ಕಾಲಮಿತಿಯೊಳಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು?</td></tr>
</table>

| | | |
|---|---|---|
| | | ಮುಂದುವರೆದು, 2023-24ನೇ ಸಾಲಿನಲ್ಲಿ ನಿವೃತ್ತಿ ಹೊಂದಿರುವ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರಿಗೆ ಉಪಧನ (Gratuity) ಪಾವತಿಗಾಗಿ ಅವಶ್ಯವಿರುವ ರೂ.39.81 ಕೋಟಿಗಳನ್ನು ಲೆಕ್ಕ ಶೀರ್ಷಿಕೆ: 2235-60-103-0-01-059 ರಡಿ 2024-25ನೇ ಸಾಲಿನ ಪೂರಕ ಅಂದಾಜು 3 ರಲ್ಲಿ ಹೆಚ್ಚುವರಿಯಾಗಿ ಒದಗಿಸಲಾಗುತ್ತಿದ್ದು, ಗ್ರಾಚ್ಯುಟಿ ಮೊತ್ತವನ್ನು ಪಾವತಿಸಲು ಕ್ರಮವಹಿಸಲಾಗುವುದು. |

**ಸಂಖ್ಯೆ: ಮಮಇ 80 ಐಸಿಡಿ 2025**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು